## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.396/2024

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಆನಂದ | CW: 7 | PW: 2 |
| ತಂದೆಯ ಹೆಸರು | : | ಚಿನ್ನತಂಬಿ | | |
| ವಯಸ್ಸು | : | 50 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಚಿನ್ನಿಕಟ್ಟೆ | | |

ದಿನಾಂಕಃ 17.02.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

1 ನೇ ಆರೋಪಿ ಗೊತ್ತಿಲ್ಲ. ಚಾಸಾ 1, 4, 8 ರಿಂದ 11 ರವರು ಗೊತ್ತು. ಮೃತ ಏಳುಮಲೈ ರವರು ಗೊತ್ತು. ಅವರು ಅಪಘಾತದಲ್ಲಿ ಮೃತಪಟ್ಟಿರುತ್ತಾರೆ ಆದರೆ ಅಪಘಾತ ಯಾವಾಗ ಹೇಗೆ ಮತ್ತು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ಅಪಘಾತ ನೋಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ, ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಈ ಸಂಬಂಧ ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ ಕೆಲವು ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ.

ಸಾಕ್ಷಿಯು 6 ಪೋಟೋಗಳಲ್ಲಿ ತನ್ನನ್ನು ತಾನು ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಸಾಕ್ಷಿಯು ಸ್ಥಳ ಪಂಚನಾಮೆ, ಕಚ್ಚಾ ನಕಾಶೆ ಮತ್ತು ವಾಹನ ಪಂಚನಾಮೆಗಳಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು, ಸ್ಥಳ ಪಂಚನಾಮೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು, ಕಚ್ಚಾ ನಕಾಶೆಯನ್ನು ನಿಪಿ 3 ಎಂದು, ಸಾಕ್ಷಿಯ ಸಹಿಯನ್ನು ನಿಪಿ 3(ಎ) ಎಂದು, ವಾಹನ ಪಂಚನಾಮೆಯನ್ನು ನಿಪಿ 4 ಎಂದು, ಸಾಕ್ಷಿಯ ಸಹಿಯನ್ನು ನಿಪಿ 4(ಎ) ಎಂದು, 6 ಪೋಟೋಗಳನ್ನು ನಿಪಿ 5 ರಿಂದ 10 ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿಃ 22.02.2024 ರಂದು ಮಧ್ಯಾಹ್ನ 12.145 ರ ಸಮಯದಲ್ಲಿ ನಮ್ಮ ಗ್ರಾಮದ ತಮಿಳು ಕಾಲೋನಿ ಕಡೆಗೆ ಹೋಗುವ ರಸ್ತೆಯ ಬದಿಯಲ್ಲಿ ವಡಿವೇಲು ಎಂಬುವವರ ಪೆಟ್ಟಿಗೆ ಅಂಗಡಿಯ ಮುಂಭಾಗ ನಾನು ಹಾಗೂ ಚಾಸಾ 8 ಮತ್ತು 9 ರವರು ಕುಳಿತುಕೊಂಡು ಮಾತನಾಡುತ್ತಿರುವಾಗ ನಮ್ಮ ಗ್ರಾಮದ ಏಳುಮಲೈ ರವರು ಬೈಕ್ ನಲ್ಲಿ ಮದ್ಯಾಹ್ನ 12.45 ರ ಸಮಯದಲ್ಲಿ ಮೋಟಾರ್ ಸೈಕಲ್ ನ್ನು ಸವಳಂಗ ಕಡೆಯಿಂದ ನಮ್ಮ ಗ್ರಾಮದ ಕಡೆ ಬಂದು ನಮ್ಮ ಗ್ರಾಮದ ತಮಿಳು ಕಾಲೋನಿ ಕಡೆ ಹೋಗಲು ಮೋಟಾರ್ ಸೈಕಲ್ ನ್ನು ಬಲಭಾಗದ ಇಂಡಿಕೇಟರ್ ಲೈಟ್ ಹಾಕಿಕೊಂಡು ಕೈ ಸನ್ನೆ ಮಾಡುತ್ತಾ ಬಲಭಾಗಕ್ಕೆ ತಿರುಗಿಸಿಕೊಂಡು ಹೋಗುತ್ತಿದ್ದಾಗ ಶಿಕಾರಿಪುರದಿಂದ ಸವಳಂಗದ ಕಡೆಗೆ ಒಬ್ಬ ಕಾರಿನ ಚಾಲಕ ತನ್ನ ಕಾರನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಕಾರಿನ ನಿಯಂತ್ರಣ ತಪ್ಪಿ ಏಳುಮಲೈರವರು ಚಾಲನೆ ಮಾಡುತ್ತಿದ್ದ ಬೈಕ್‌ಗೆ ಡಿಕ್ಕಿಪಡಿಸಿದ್ದರಿಂದ ಬೈಕಿನ ಸಮೇತ ಕೆಳಗೆ ಬಿದ್ದು ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಅಪಘಾತಪಡಿಸಿದ ಕಾರ್ ನಂಬರ್ ಕೆಎ 14 ಬಿ 8467 ಹಾಗೂ ಅದರ ಚಾಲಕನ ಹೆಸರು ರಾಘುವೇಂದ್ರ ಎಂದು ನನಗೆ ತಿಳಿಯಿತು ಎಂದರೆ ಸರಿಯಲ್ಲ. ನಂತರ ಏಳುಮಲೈರವರನ್ನು 108 ಆ್ಯಂಬುಲೆನ್ಸ್ ನಲ್ಲಿ ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿದ್ದು ಏಳುಮಲೈರವರನ್ನು ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿರುವಾಗ ಚಿಕಿತ್ಸೆ ಫಲಕಾರಿಯಾಗದೇ ಅದೇ ದಿನ ಮಧಾಹ್ನ

2.30 ಕ್ಕೆ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ.

ದಿಃ 23.02.2024 ರಂದು ನಾನು ಸ್ಥಳ ತೋರಿಸಿದ ಮೇರೆಗೆ ಪೊಲೀಸರು ಚಾಸಾ 10 ಮತ್ತು 11 ರವರ ಸಮಕ್ಷಮ ಸಂಜೆ 4.30 ರಿಂದ 5.15 ರ ಸಮಯದಲ್ಲಿ ನಿಪಿ 2 ರಂತೆ ಸ್ಥಳ ಪಂಚನಾಮೆ ಜರುಗಿಸಿ , ನಿಪಿ 3 ರಂತೆ ಕಚ್ಚಾ ನಕಾಶೆ ತಯಾರಿಸಿ , ನಿಪಿ 5 ಮತ್ತು 6 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ನಮ್ಮಗಳ ಸಮಕ್ಷಮ ಸವಳಂಗ ಉಪಪೊಲೀಸ್ ಠಾಣಾ ಆವರಣದಲ್ಲಿ ಪೋಲೀಸರು ಸಂಜೆ 5.30 ರಿಂದ 6.15 ರ ಸಮಯದಲ್ಲಿ ನಿಪಿ 4 ರಂತೆ ವಾಹನ ಪಂಚನಾಮೆ ಜರುಗಿಸಿ ಕೆಎ 14 ಬಿ 8467 ನಂಬರ್ ನ ಕಾರು ಹಾಗೂ ಕೆಎ 17 ಇಎಲ್ 8741 ನಂಬರ್ ನ ಮೋಟಾರ್ ಸೈಕಲ್ ನ್ನು ಅಮಾನತ್ತುಪಡಿಸಿಕೊಂಡು ನಿಪಿ 7 ರಿಂದ 10 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು ಪೋಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಒಪ್ಪದ ಹೇಳಿಕೆಯನ್ನು ನಿಪಿ 11 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.